23. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **10253.70** ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

24. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಕಾನೂನು'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **438.00** ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

25. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **148.16** ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

4. ಶಾಸನ ರಚನೆ

(i) ವಿಧೇಯಕಗಳ ಮಂಡನೆ :

ಅ) ಕರ್ನಾಟಕ ಧನವಿನಿಯೋಗ ವಿಧೇಯಕ, 2009

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಯವರು) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

" 2009ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಯವರು) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ – 1)

ಆ) ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕ, 2009

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಯವರು) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

" 2009ರ ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಯವರು) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ – 2)

ಇ) ಕರ್ನಾಟಕ ತೆರಿಗೆ ಕಾನೂನು (ತಿದ್ದುಪಡಿ) ವಿಧೇಯಕ, 2009

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್. ಯರಿಯೂರಪ್ಪ (ಮುಖ್ಯಮಂತ್ರಿಯವರು) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ತೆರಿಗೆ ಕಾನೂನು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

" 2009ರ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಯವರು) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ತೆರಿಗೆ ಕಾನೂನು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ – 3)

ಈ) ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2009